# <u>ಮಂಗಳೂರು ವಿಶ್ವವಿದ್ಯಾನಿಲಯ</u>

ದಿನಾಂಕ 18.07.2025 ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಮಂಗಳೂರು ವಿಶ್ವವಿದ್ಯಾನಿಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.

ಉಪಸ್ಥಿತರು:

ಅನುಪಸ್ಥಿತರು:

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳನ್ನು, ಎಲ್ಲಾ ನಿಕಾಯದ ಡೀನರುಗಳನ್ನು, ಶೈಕ್ಷಣಿಕ ಮಂಡಳಿಯ ಸದಸ್ಯರುಗಳನ್ನು, ವಿಶ್ವವಿದ್ಯಾನಿಲಯದ ಆಡಳಿತ ಸಿಬ್ಬಂದಿಗಳನ್ನು ಹಾಗೂ ಪತ್ರಿಕಾ ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿ, ಸಭೆಯನ್ನು ಮುಂದುವರೆಸಿದರು.

- **ಕೃತಜ್ಞತೆ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(vi) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಶ್ರೀ ಅಭಿಷೇಕ್ ಸುವರ್ಣ, ಪ್ರಾಂಶುಪಾಲರು, ಶಿರ್ಡಿ ಸಾಯಿ ಡಿಗ್ರಿ ಕಾಲೇಜು, ಕಾರ್ಕಳ, ಉಡುಪಿ ಜಿಲ್ಲೆ** ಇವರ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿರುತ್ತದೆ ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(X) ರಂತೆ ಹಾಗೂ ವಿದ್ಯಾರ್ಥಿ ಪ್ರತಿನಿಧಿಗಳನ್ನು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ನಾಮನಿರ್ದೇಶನ ಮಾಡುವ ಪರಿನಿಯಮದ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ನಾಮನಿರ್ದೇಶನಗೊಂಡಿದ್ದ **ಕು. ಶ್ರದ್ಧಾ ಆರ್.,** ತೃತೀಯ ಬಿ.ಬಿ.ಎ. ಡಾ. ಬಿ.ಬಿ. ಹೆಗ್ಡೆ ಪ್ರಥಮ ದರ್ಜೆ ಕಾಲೇಜು, ಕುಂದಾಪುರ-576201 **(ಪದವಿ ವಿದ್ಯಾರ್ಥಿ ಪ್ರತಿನಿಧಿ) ಹಾಗೂ ಕು. ವರೇಣ್ಯ ಬಿ., ದ್ವಿತೀಯ ಎಂ.ಎಸ್ಸಿ., ಗಣಿತ ಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ (ಸ್ನಾತಕೋತ್ತರ ವಿದ್ಯಾರ್ಥಿ ಪ್ರತಿನಿಧಿ)** ಇವರುಗಳ ಸದಸ್ಯತ್ವದ ಅವಧಿಯು ಮುಕ್ತಾಯಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿರುತ್ತದೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರೆಲ್ಲರಿಗೂ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯ ಪರವಾಗಿ ಕೃತಜ್ಞತಾಪೂರ್ವಕ ವಂದನೆಗಳನ್ನು ಸಲ್ಲಿಸಲಾಯಿತು.

## I. ನಡವಳಿಗಳ ದೃಢೀಕರಣ:

ದಿನಾಂಕ 29.05.2025 ರಂದು ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯ ದೃಢೀಕರಣ.

**ನಡವಳಿಯನ್ನು ಈ ಕೆಳಗಿನ ತಿದ್ದುಪಡಿಯೊಂದಿಗೆ ದೃಢೀಕರಿಸಲಾಯಿತು.**

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಹಣಕಾಸು:ಶೈ.ಮ.ವಿ.ಸ.1:1 (2025-26)** |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ 2025-26ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2024-25ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ. |
| **ತಿದ್ದುಪಡಿ ನಿರ್ಣಯ:** | **ಅನುಮೋದಿಸಲಾಯಿತು.** |

ವಿಧಾನ ಪರಿಷತ್ ಶಾಸಕರಾದ ಶ್ರೀ ಮಧು ಜಿ. ಮಾದೇಗೌಡ, ಈ ಕೆಳಗಿನ ಸಲಹೆಗಳನ್ನು ಸಭೆಗೆ ನೀಡಿದರು.

- ವಿಶ್ವವಿದ್ಯಾನಿಲಯದ 2025-26ನೇ ಸಾಲಿನ ಆಯವ್ಯಯದಲ್ಲಿ ₹.37.00 ಕೋಟಿ ಕೊರತೆಯಾಗಿದ್ದು, ಈ ಬಗ್ಗೆ ವಿಶ್ವವಿದ್ಯಾನಿಲಯವು ಆಂತರಿಕ ಸಂಪನ್ಮೂಲವನ್ನು ಹೆಚ್ಚಿಸುವಲ್ಲಿ ಗಮನಹರಿಸಬೇಕು ಎಂದರು.

- ವಿಶ್ವವಿದ್ಯಾನಿಲಯಕ್ಕೆ ಈ ಹಿಂದೆ ಯುಜಿಸಿಯಿಂದ ಮತ್ತು ಸರಕಾರದಿಂದ ವಿವಿಧ ಅನುದಾನಗಳು ಬರುತ್ತಿದ್ದು, ಈಗ ಈ ಅನುದಾನಗಳು ಬರುತ್ತಿಲ್ಲ. ಈ ಕಾರಣದಿಂದ ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗಗಳು ಸ್ವ-ಸಂಪನ್ಮೂಲ ಸಂಗ್ರಹಿಸುವ ಶಕ್ತಿ ಪಡೆದು ಆರ್ಥಿಕವಾಗಿ ಸದೃಢವಾಗಬೇಕಿದೆ. ಈ ನಿಟ್ಟಿನಲ್ಲಿ ಪ್ರತಿ ವಿಭಾಗದ ಮುಖ್ಯಸ್ಥರು ಹೊಸ ಯೋಜನೆಗಳ ಬಗ್ಗೆ ಗಮನಹರಿಸಿ, ವಿಭಾಗದ ನೆಲೆಯಲ್ಲಿ ಸಂಪನ್ಮೂಲ ಕ್ರೋಢೀಕರಣಕ್ಕೆ ಪ್ರಯತ್ನಿಸಿದರೆ ಭವಿಷ್ಯದ ದೃಷ್ಟಿಯಿಂದ ಉತ್ತಮ ಹಾಗೂ ವಿಭಾಗಗಳು ಆರ್ಥಿಕವಾಗಿ ಸದೃಢವಾಗಬಹುದು ಎಂದರು.

- ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಗಳು ತುಂಬಾ ಕಡಿಮೆಯಾಗುತ್ತಿದ್ದು, ವಿಶ್ವವಿದ್ಯಾನಿಲಯವು ಕೈಗಾರಿಕಾ ಘಟಕಗಳೊಂದಿಗೆ ಕೈಜೋಡಿಸಿ, ಅವರ ಜೊತೆ MOU ಮಾಡಿಕೊಂಡು, ವಿದ್ಯಾರ್ಥಿಗಳು ಪದವಿ ಪಡೆದ ನಂತರ ಉದ್ಯೋಗ ನೀಡುವ ಖಾತರಿ ನೀಡದರೆ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆ ಜಾಸ್ತಿಯಾಗಬಹುದು ಎಂದರು.

  ಈ ಬಗ್ಗೆ ಮಾನ್ಯ ಕುಲಪತಿಯವರು ವಿಶ್ವವಿದ್ಯಾನಿಲಯವು ಈಗ ತನ್ನ ಎಲ್ಲಾ ಚಟುವಟಿಕೆಗಳಲ್ಲಿ ಆರ್ಥಿಕ ವೆಚ್ಚಗಳನ್ನು ಕಡಿಮೆ ಮಾಡುವ ವಿಧಾನ ಅನುಸರಿಸುತ್ತಿರುವುದಾಗಿ ತಿಳಿಸಿದರು ಹಾಗೂ ವಿಶ್ವವಿದ್ಯಾನಿಲಯಕ್ಕೆ ಕಳೆದ ವರ್ಷ 4 ಪೇಟೆಂಟ್‌ಗಳು ಬಂದಿದ್ದು, ಬೇರೆ ಬೇರೆ ಸಂಸ್ಥೆಗಳ ಜೊತೆ ವಿಶ್ವವಿದ್ಯಾನಿಲಯದ 18 ವಿಭಾಗಗಳು ಒಪ್ಪಂದ ಮಾಡಿಕೊಂಡಿದ್ದು, ಸಂಶೋಧನೆಗೆ ಉತ್ತೇಜನ ನೀಡಲು ಈ ವರ್ಷದಿಂದ ಆಯ್ದ ಐವರು ಯುವ ಶಿಕ್ಷಕರುಗಳಿಗೆ ತಲಾ ₹.1.00 ಲಕ್ಷದಂತೆ ಮೂಲಧನವಾಗಿ ಆಯ್ದ ಕಿರು ಸಂಶೋಧನಾ ಪ್ರಸ್ತಾವನೆಗಳಿಗೆ ನೀಡಲು ತೀರ್ಮಾನಿಸಲಾಗಿದೆ ಎಂದರು.

  ಮುಂದುವರಿದು, ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳಿಗೆ ಉದ್ಯೋಗ ನೀಡುವ ಖಾತರಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಹಾಗೂ ವಿಶ್ವವಿದ್ಯಾನಿಲಯದಲ್ಲಿ ಕಳೆದ 15 ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವ ಹಿರಿಯರನ್ನು ವಿಶ್ವವಿದ್ಯಾನಿಲಯದ ಆಡಳಿತ ವಿಭಾಗದಲ್ಲಿ ಕಾರ್ಯನಿರ್ವಹಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

**II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ಪರಿನಿಯಮ/ವಿನಿಮಯಗಳು.**

-ಯಾವುದೂ ಇರುವುದಿಲ್ಲ.

**III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು.**

**ಈ ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:1 (2025-26)

**ವಿಷಯ:** ಡಿಪ್ಲೋಮಾ, ಪಿ.ಜಿ. ಡಿಪ್ಲೋಮಾ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಪರಿಷ್ಕೃತ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ನಿಕಾಯಗಳ ಸಾಮಾನ್ಯ ಸಭೆಯ ನಿರ್ಣಯದಂತೆ ಸಂಬಂಧಿಸಿದ ಡೀನರು ಅನುಮೋದಿಸಿದ ಕ್ರಮ ಸಂಖ್ಯೆ 1 ರಿಂದ 24ರ ವರೆಗಿನ ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:2 (2025-26)

**ವಿಷಯ:** ಮಹಾತ್ಮ ಗಾಂಧಿ ಮೆಮೋರಿಯಲ್ ಕಾಲೇಜು, ಉಡುಪಿ ವಿದ್ಯಾಸಂಸ್ಥೆಗೆ ಸ್ವಾಯತ್ತ ಸ್ಥಾನಮಾನ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:3 (2025-26)

**ವಿಷಯ:** ಸ್ನಾತಕೋತ್ತರ ಕಾರ್ಯಕ್ರಮಗಳ ವಿದ್ಯಾರ್ಥಿ ಪ್ರವೇಶಾರ್ಹತೆ ತಿದ್ದುಪಡಿ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ಶೈ.ಮ.ಸಾ.ಸ.1:4 (2025-26)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭೆ ಹಾಗೂ ಇತರ ಸಭೆಗಳಿಗೆ ಹಾಜರಾಗುವ ಅಧಿಕಾರೇತರ ಸದಸ್ಯರಿಗೆ ಮತ್ತು ಸರಕಾರಿ ಸೇವೆಯಲ್ಲಿರುವ ಸದಸ್ಯರುಗಳಿಗೆ ಪ್ರಯಾಣ ಭತ್ಯೆ, ದಿನಭತ್ಯೆ ಮತ್ತು ಉಪಸ್ಥಿತಿ ಭತ್ಯೆ ಪಾವತಿಯ ಕುರಿತು ರಚಿಸಿದ ಪರಿಷ್ಕೃತ ಪರಿನಿಯಮ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಶೈ.ಮ.ಸಾ.ಸ.1:5 (2025-26)

**ವಿಷಯ:** 2025-26ನೇ ಸಾಲಿಗೆ ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಬಗ್ಗೆ.

**ನಿರ್ಣಯ:** ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಮ.ಸಾ.ಸ.1:6 (2025-26)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಉದ್ಯೋಗಿಗಳ ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ ನಿಯಮಗಳು ಪರಿನಿಯಮಕ್ಕೆ ತಿದ್ದುಪಡಿ ಮಾಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:7 (2025-26)

**ವಿಷಯ:** ಶೈಕ್ಷಣಿಕ ವರ್ಷ 2025-26ನೇ ಸಾಲಿನ ಪದವಿ ಕಾರ್ಯಕ್ರಮಗಳ ದ್ವಿತೀಯ ಸೆಮಿಸ್ಟರ್‌ಗಳಿಗೆ ಅನ್ವಯವಾಗುವ ಪರಿಸರ ಅಧ್ಯಯನ (Compulsory Course)ನ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಹಾಗೂ ಸದರಿ ಕೋರ್ಸನ್ನು ಬೋಧಿಸುವ ಉಪನ್ಯಾಸಕರ ವಿದ್ಯಾರ್ಹತೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:8 (2025-26)

**ವಿಷಯ:** ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಸಾಮಾನ್ಯ ಸಭೆಯ ನಿರ್ಣಯದಂತೆ ಡೀನರು ಅನುಮೋದಿಸಿದ ಕ್ರಮ ಸಂಖ್ಯೆ 1 ರಿಂದ 18 ರವರೆಗಿನ ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:9 (2025-26)

**ವಿಷಯ:** ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ಕಲಾ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಕಲಾ ನಿಕಾಯದ ಸಾಮಾನ್ಯ ಸಭೆಯ ನಿರ್ಣಯದಂತೆ ಡೀನರು ಅನುಮೋದಿಸಿದ ಕ್ರಮ ಸಂಖ್ಯೆ 1 ರಿಂದ 26 ರವರೆಗಿನ ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:10 (2025-26)

**ವಿಷಯ:** ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ವಾಣಿಜ್ಯ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ವಾಣಿಜ್ಯ ನಿಕಾಯದ ಸಾಮಾನ್ಯ ಸಭೆಯ ನಿರ್ಣಯದಂತೆ ಡೀನರು ಅನುಮೋದಿಸಿದ ಕ್ರಮ ಸಂಖ್ಯೆ 1 ರಿಂದ 15 ರವರೆಗಿನ ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:11 (2025-26)

**ವಿಷಯ:** ಪದವಿ ಮಟ್ಟದ ಕಾರ್ಯಕ್ರಮದಲ್ಲಿ ಸಂಖ್ಯಾಶಾಸ್ತ್ರ ಕೋರ್ ಕೋರ್ಸಿಗೆ ವಿದ್ಯಾರ್ಥಿ ಪ್ರವೇಶಾರ್ಹತೆ ನಿಗದಿ - ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.1:12 (2025-26)

**ವಿಷಯ:** ಪಠ್ಯಕ್ರಮಗಳಲ್ಲಿ ಭಾರತೀಯ ಜ್ಞಾನ ವ್ಯವಸ್ಥೆಗೆ (Indian Knowledge System-IKS) ಯನ್ನು ಅಳವಡಿಸಿಕೊಂಡಿರುವ ಸಂಬಂಧ ತಯಾರಿಸಿರುವ ವರದಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ವಿಶ್ವವಿದ್ಯಾನಿಲಯ ಅನುದಾನ ಆಯೋಗದ ನಿರ್ದೇಶನದಂತೆ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳನ್ನು ಪ್ರತಿ ಮೂರು ವರ್ಷಗಳಿಗೊಮ್ಮೆ ಪರಿಷ್ಕರಿಸಬೇಕಾಗಿರುವುದರಿಂದ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಪದವಿ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳನ್ನೂ ಪ್ರಚಲಿತ ವಿದ್ಯಮಾನಕ್ಕೆ ಪೂರಕವಾಗಿ ಪಠ್ಯಕ್ರಮಗಳಲ್ಲಿ ಕಲಿಕಾ ವಿಷಯಗಳನ್ನು ಮಾರ್ಪಾಡು ಮಾಡಿಕೊಂಡು ಆದ್ಯತೆಯ ಮೇರೆಗೆ ಪರಿಷ್ಕರಿಸಬೇಕಾಗಿ ಎಲ್ಲಾ ಅಧ್ಯಯನ ಮಂಡಳಿ ಅಧ್ಯಕ್ಷರುಗಳಿಗೆ ಸಲಹೆ ನೀಡಲಾಯಿತು.

2. ಕಾರ್ಯಕ್ರಮಗಳ ಪಠ್ಯಕ್ರಮಗಳಲ್ಲಿ Programme objective, course outcome ಗಳನ್ನು ಅಳವಡಿಸಿಕೊಂಡು ಪಠ್ಯಕ್ರಮಗಳಲ್ಲಿ ಕೌಶಲ್ಯ, ಉದ್ಯೋಗಶೀಲ ವಿಚಾರಗಳು ಇವುಗಳ ಬಗ್ಗೆ mapping ಎಲ್ಲಾ ಅಧ್ಯಯನ ಮಂಡಳಿ ಅಧ್ಯಕ್ಷರುಗಳಿಗೆ ಮಾಡಬೇಕಾಗಿ ಸಲಹೆ ನೀಡಲಾಯಿತು.

3. ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಎಲ್ಲಾ ಕಾರ್ಯಕ್ರಮಗಳ ಪಠ್ಯಕ್ರಮಗಳಲ್ಲಿ ಏಕರೂಪತೆಯ ಕೋರ್ಸು ಕೋಡುಗಳನ್ನು ಅಳವಡಿಸಿಕೊಳ್ಳಬೇಕಾಗಿ ನಿರ್ಣಯಿಸಿ ಈ ಬಗ್ಗೆ ಕುಲಸಚಿವರು (ಪರೀಕ್ಷಾಂಗ) ಕಚೇರಿಯಿಂದ ಸೂಕ್ತ ಕ್ರಮಕೈಗೊಳ್ಳಲು ತಿಳಿಸಲಾಯಿತು.

4. ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳಲ್ಲಿ ಆಯಾಯ ಕೋರ್ಸುಗಳಿಗೆ ನಮೂದಿಸಲಾಗಿರುವ ಕ್ರೆಡಿಟಿಗೆ ಪೂರಕವಾದ ಕಾರ್ಯಭಾರವನ್ನು ಸಂಬಂಧಪಟ್ಟ ಅರ್ಹ ವಿಷಯ ಪರಿಣಿತ ಬೋಧಕರಿಂದಲೇ ತರಗತಿಗಳನ್ನು ನಡೆಸಿಕೊಂಡು ಪರೀಕ್ಷಾ ಕಾರ್ಯಗಳನ್ನೂ ಕಡ್ಡಾಯವಾಗಿ ಅವರಿಂದಲೇ ನಿರ್ವಹಿಸುವಂತೆ ತಿಳಿಸಲಾಯಿತು. ರಾಜ್ಯ ಶಿಕ್ಷಣ ನೀತಿ ಆಯೋಗದ ಅಂತಿಮ ವರದಿಯು ಸರಕಾರದಿಂದ ವಿಶ್ವವಿದ್ಯಾನಿಲಯಕ್ಕೆ ಸ್ವೀಕೃತವಾದ ನಂತರ ಈ ಬಗ್ಗೆ ಮುಂದಿನ ಸೂಕ್ತ ಕ್ರಮಕೈಗೊಳ್ಳಲಾಗುವುದಾಗಿ ತಿಳಿಸಿದರು.

5. ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಡಿಯ ಸಂಯೋಜಿತ ಕಾಲೇಜಿನಲ್ಲಿ ನಡೆಸಲಾಗುವ B.A.(HRD) ಕಾರ್ಯಕ್ರಮವು ಕಲಾ ನಿಕಾಯದಡಿಯಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾವವಾಗಿರುವ ಹಿನ್ನೆಲೆಯಲ್ಲಿ ಕುಲಪತಿಯವರು ಯುಜಿಸಿ ನಿರ್ದೇಶನದನುಸಾರ ಸದರಿ ಕಾರ್ಯಕ್ರಮದ ಶಿರೋನಾಮೆಯನ್ನು BHRD ಯಿಂದ B.A.(HRD) ಎಂಬುದಾಗಿ ಮರುನಾಮಕರಣ ಮಾಡಿರುವುದಾಗಿ ತಿಳಿಸಿದರು. ಅಲ್ಲದೆ, ಸದರಿ ವಿಷಯವನ್ನು ಉತ್ಕೃಷ್ಟಗೊಳಿಸುವ ನಿಟ್ಟಿನಲ್ಲಿ ಕಲಾ ಮತ್ತು ವಾಣಿಜ್ಯ ನಿಕಾಯದ ಸದಸ್ಯರುಗಳನ್ನು ಸೇರ್ಪಡಿಸಿಕೊಂಡು ಅಧ್ಯಯನ ಮಂಡಳಿಯನ್ನು ರಚಿಸಿಕೊಂಡು ಮುಂದಿನ ಕ್ರಮವಹಿಸಲು ತಿಳಿಸಲಾಯಿತು.

6. ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಕಾರ್ಯಯೋಜನೆಯಲ್ಲಿರುವ ಕೌಶಲ್ಯವರ್ಧಕ [compulsory Skill courses] ಕೋರ್ಸುಗಳಿಗೆ ಸಂಬಂಧಿಸಿ ಪದವಿ ಕಾಲೇಜುಗಳ ಶಿಕ್ಷಕರುಗಳೊಂದಿಗೆ ಚರ್ಚಿಸಿಕೊಂಡು ವಿದ್ಯಾರ್ಥಿಗಳಿಗೆ ಪೂರಕವಾದ ಕೌಶಲ್ಯವರ್ಧಕ ಕೋರ್ಸುಗಳನ್ನು ಅಳವಡಿಸಿಕೊಳ್ಳಲು ಸಲಹೆ ನೀಡಲಾಯಿತು.

7. ಪದವಿ ಕಾರ್ಯಕ್ರಮಗಳ ಬಿ.ಕಾಂ. ಕಾರ್ಯಕ್ರಮಗಳಲ್ಲಿ ವಿವಿಧ ನಮೂನೆಯ ವಿಶೇಷತೆಯುಳ್ಳ ವೊಕೇಷನಲ್ ಕೋರ್ಸುಗಳಿದ್ದು, ಕಾಲೇಜುಗಳು ಸಂಯೋಜನೆಗೆ ಅರ್ಜಿಗಳನ್ನು ಸಲ್ಲಿಸುವ ಸಂದರ್ಭದಲ್ಲಿ ಕಾರ್ಯಕ್ರಮಗಳ ಶಿರೋನಾಮೆಯನ್ನು ಪರಿಶೀಲಿಸಿಕೊಂಡು ಸಂಯೋಜನಾ ಪೋರ್ಟಲಿನಲ್ಲಿ ಸರಿಯಾಗಿ ಕಾರ್ಯಕ್ರಮಗಳ ಶಿರೋನಾಮೆಯನ್ನು ನಮೂದಿಸಿಕೊಂಡಲ್ಲಿ ಮಾತ್ರ

ಅಂಕಪಟ್ಟಿಯಲ್ಲಿಯೂ ಸದರಿ ಕಾರ್ಯಕ್ರಮದ ಶಿರೋನಾಮೆಯು ಪ್ರತಿಬಿಂಬಿಸುವುದಾಗಿ ತಿಳಿಸಿದರು. ಯು.ಯು.ಸಿ.ಎಂ.ಎಸ್. ತಂತ್ರಾಂಶದಲ್ಲಿ ಈ ಬಗ್ಗೆ ಕಾಲೇಜು ಪ್ರಾಂಶುಪಾಲರಗಳು ಸರಿಯಾದ ಶಿರೋನಾಮೆಯನ್ನು ನಮೂದಿಸಲು ಸೂಕ್ತ ಕ್ರಮಕೈಗೊಳ್ಳಲು ಸೂಚಿಸಲಾಯಿತು.

8. ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಅಂತಿಮ ಸೆಮಿಸ್ಟರಿನಲ್ಲಿ ವಿದ್ಯಾರ್ಥಿಗಳಿಗೆ Internship ಅನ್ನು ನೀಡಿಕೊಂಡು ವಿದ್ಯಾರ್ಥಿಗಳು ತರಗತಿಯೇತರ ಚಟುವಟಿಕೆಗಳಲ್ಲಿ ಕೌಶಲ್ಯ ಅಭಿವೃದ್ಧಿಯನ್ನು ಪಡೆದುಕೊಳ್ಳಲು ಅನುಕೂಲವಾಗುವಂತೆ ಸೂಕ್ತ ಕ್ರಮಕೈಗೊಳ್ಳಬೇಕಾಗಿ ಎಲ್ಲಾ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳಿಗೆ ಸಲಹೆ ನೀಡಲಾಯಿತು.

9. ವಿಶ್ವವಿದ್ಯಾನಿಲಯದ ಆವರಣದಲ್ಲಿ ನಡೆಸಲಾಗುತ್ತಿರುವ ವಿವಿಧ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಕರ್ಷಿಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳ ವಿದ್ಯಾರ್ಥಿ ಪ್ರವೇಶಾರ್ಹತೆಯನ್ನು ಮಾರ್ಪಾಡುಗೊಳಿಸಿ ಶೈಕ್ಷಣಿಕ ಗುಣಮಟ್ಟವನ್ನು ಗಮನದಲ್ಲಿರಿಸಿಕೊಂಡು ತಿದ್ದುಪಡಿ ಮಾಡಬಹುದೆಂಬುದಾಗಿ ಸಲಹೆ ನೀಡಲಾಯಿತು.

10. ಸರಕಾರದ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಿಕೊಂಡು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಭೌತಿಕ ಅಂಕಪಟ್ಟಿಯನ್ನು ನೀಡುತ್ತಿರುವುದಾಗಿ ಸಭೆಗೆ ತಿಳಿಸಲಾಯಿತು.

11. ಅಂತಿಮ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶಗಳನ್ನು ಆದಷ್ಟು ಶೀಘ್ರದಲ್ಲಿ ಪ್ರಕಟಿಸುವುದಾಗಿ ಸಭೆಗೆ ತಿಳಿಸಲಾಯಿತು.

**ಮಾನ್ಯ ಕುಲಪತಿಯವರು ಶೈಕ್ಷಣಿಕ ಮಂಡಳಿ ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

ಸಹಿ/-

**ಕುಲಪತಿಗಳು.**